# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 159(149) |
| ಸದಸ್ಯರ ಹೆಸರು | ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 03.03.2020 |
| ಉತ್ತರಿಸುವವರು | ಪೌರಾಡಳಿತ, ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಅಕ್ರಮ ಹಾಗೂ ಅನಧಿಕೃತ ಕಟ್ಟಡಗಳ ನಿರ್ಮಾಣ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕಟ್ಟಡಗಳ ನಿರ್ಮಾಣವಾಗಿರುವುದು ಕಂಡು ಬಂದಿರುತ್ತದೆ. |
| (ಆ) | ಬಂದಿದ್ದಲ್ಲಿ, ಅಕ್ರಮ ಹಾಗೂ ಅನಧಿಕೃತ ಕಟ್ಟಡಗಳ ನಿರ್ಮಾಣದ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು) | ನಗರ ಸ್ಥಳೀಯ ಸಂಸ್ಥೆಯ ಜಾಗದಲ್ಲಿ ಅಕ್ರಮವಾಗಿ ನಿರ್ಮಾಣ ಮಾಡಿರುವಂತಹ ಕಟ್ಟಡಗಳನ್ನು ತೆರವುಗೊಳಿಸಿ ನಗರ ಸ್ಥಳೀಯ ಸಂಸ್ಥೆಯ ವಶಕ್ಕೆ ಪಡೆಯಲು ಕ್ರಮವಹಿಸಲಾಗುತ್ತಿದೆ.<br><br>ನಗರ ಸ್ಥಳೀಯ ಸಂಸ್ಥೆಯಿಂದ ಪರವಾನಿಗೆಯನ್ನು ಪಡೆಯದೇ ನಿರ್ಮಿಸುವ ಅನಧಿಕೃತ ಕಟ್ಟಡಗಳಿಗೆ ಕರ್ನಾಟಕ ಮಹಾನಗರ ಪಾಲಿಕೆ ಅಧಿನಿಯಮ 1976ರ ಕಲಂ 321 ಹಾಗೂ ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರ ಕಲಂ 187ರ ರೀತ್ಯಾ ತೆರವುಗೊಳಿಸಲು ಕ್ರಮವಹಿಸಲಾಗುತ್ತಿದೆ.<br><br>ಈಗಾಗಲೇ ಅನಧಿಕೃವಾಗಿ ನಿರ್ಮಿಸಲಾಗಿರುವ ಕಟ್ಟಡಗಳಿಗೆ ಕರ್ನಾಟಕ ಮಹಾನಗರ ಪಾಲಿಕೆ ಅಧಿನಿಯಮ 1976ರ ಕಲಂ 112(ಸಿ) ಹಾಗೂ ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರ ಕಲಂ 107ರ ರೀತ್ಯಾ ಸ್ವತ್ತು ತೆರಿಗೆಯ ಎರಡರಷ್ಟಕ್ಕೆ ಸಮನಾದ ದಂಡವನ್ನು ವಿಧಿಸಲಾಗುತ್ತಿದೆ. |

**ಸಂಖ್ಯೆ: ನಅಇ 12 ಜಿಇಎಲ್ 2020**

(ನಾರಾಯಣ ಗೌಡ)
ಪೌರಾಡಳಿತ, ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು